## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಮನ/ಪಿಆರ್/ 05/2022-23 ದಿನಾಂಕ: 6/8/2022

**ದಿನಾಂಕ:- 06-08-2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:-**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ಸಭೆಯಲ್ಲಿ ಸಾರ್ವಜನಿಕರೊಂದಿಗೆ ಚರ್ಚಿಸಿ ಮುಖ್ಯರಸ್ತೆ ವಿಭಾಗಗಕ್ಕೆ ಸಂಬಂಧಿಸಿದ ರಸ್ತೆ ಗುಂಡಿ ಮುಚ್ಚುವುದು, ಒತ್ತುವರಿ ಪಾದಚಾರಿ ಮಾರ್ಗಗಗಳನ್ನು ತೆರವುಗೊಳಿಸುವುದು, ಡೆಬ್ರೀಸ್ ತೆರವುಗೊಳಿಸುವುದು ಹಾಗೂ ಇತರೇ ಯಾವುದೇ ಸಮಸ್ಯೆಗಳಿದ್ದರೂ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದವರನ್ನು ಸಂಪರ್ಕಿಸಲು ಸೂಚಿಸಲಾಯಿತು.
2. ಯೋಜನೆ ವಿಭಾಗಕ್ಕೆ ಬರುವ ಸಮಸ್ಯೆಗಳನ್ನು ಯೋಜನೆ ವಿಭಾಗದ ಅಭಿಯಂತರರುಗಳಿಗೆ ಮನವಿ ಸಲ್ಲಿಸಲು ಸಭೆಗೆ ಹಾಜರಿದ್ದ ಸದಸ್ಯರಿಗೆ ತಿಳಿಸಲಾಯಿತು.
3. ಯೋಜನೆ ವಿಭಾಗಕ್ಕೆ ಮತ್ತು ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗಕ್ಕೆ ಸೇರುವ ರಸ್ತೆಗಳ ವಿವರಗಳನ್ನು ಸಭೆಗೆ ಸಲ್ಲಿಸಲಾಯಿತು.
4. ವಾರ್ಡಿನ ರಸ್ತೆಗಳಲ್ಲಿ ಬರುವ ಸಮಸ್ಯೆಗಳಿಗರ ಕಾಮಗಾರಿ ವಿಭಾಗದಿಂದ ಕ್ರಮ ಕೈಗೊಳ್ಳುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು.
5. ನಂ.46, ಮಾಸ್ಕ್ ರಸ್ತೆಯಲ್ಲಿರುವ ಕಲ್ಯಾಣ ಮಂಟಪದ ಮುಂಭಾಗ ಅನಧೀಕೃತವಾಗಿ ವಾಹನ ನಿಲ್ಲಿಸುತ್ತಿರುವ ಬಗ್ಗೆ ಕ್ರಮಕೈಗೊಳ್ಳಲು ಸಂಬಂಧಪಟ್ಟ ಪೋಲೀಸ್ ಇಲಾಖೆಯವರಿಗೆ ಪತ್ರ ಬರೆಯಲು ಸೂಚಿಸಲಾಯಿತು.
6. ವಾರ್ಡ್ ವ್ಯಾಪ್ತಿಯ ಸ್ವತ್ತಿನ ಸಂಖ್ಯೆ 46, ಮಾಸ್ಕ್ ರಸ್ತೆಯಲ್ಲಿ 07 ಅಂತಸ್ತಿನ ಕಟ್ಟಡ ನಿರ್ಮಿಸುತ್ತಿರುವ ಬಗ್ಗೆ ಚರ್ಚಿಸಿ ಸದರಿ ಕಟ್ಟಡಕ್ಕೆ ನೋಟೀಸ್ ನೀಡಲು ತಿಳಿಸಲಾಯಿತು.
7. ವಾರ್ಡ್ ವ್ಯಾಪ್ತಿಯ ಸ್ವತ್ತಿನ ಸಂಖ್ಯೆ 43, ರಾಬರ್ಟ್ ಸನ್ ರಸ್ತೆಯಲ್ಲಿ ನಕ್ಷೆ ಮುಂಜೂರಾತಿಗೆ ವ್ಯತಿರಿಕ್ತವಾಗಿ ಹಾಗೂ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡು ರ್‍ಯಾಂಪ್ ನಿರ್ಮಿಸುತ್ತಿರುವ ಕಟ್ಟಡಕ್ಕೆ ನೋಟೀಸ್ ನೀಡಲು ತಿಳಿಸಲಾಯಿತು.
8. ವಾರ್ಡಿನ ಎಲ್ಲಾ ರಸ್ತೆಗಳಲ್ಲಿ Dust Bin ಗಳನ್ನು ಅಳವಡಿಸಲು ಕ್ರಮಕೈಗೊಳ್ಳಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ನೋಡಲ್ ಅಧಿಕಾರಿಗಳು** **ಕಾರ್ಯದರ್ಶಿ**

Scanned with CamScanner